ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಯವರ ನ್ಯಾಯಾಲಯ, ಕುಂದಾಪುರ
ಸಿ.ಸಿ. ನಂಬ್ರ:513/2024

ಚಾಸಾ:3 ಪ್ರಾಸಾ:3

ದಿನಾಂಕ: 15.12.2025

| | | |
|---|---|---|
| ವಾಗ್ಮೂಲದವರ ಹೆಸರು | : | ಶ್ರೀ ಜಗದೀಶ |
| ತಂದೆಯ ಹೆಸರು | : | ಗಿರಿಯ ಬಿಲ್ಲವ |
| ವಯಸ್ಸು | : | 58 ವರ್ಷ |
| ಉದ್ಯೋಗ | : | ಫಾಸ್ಟ್ ಪುಡ್ ಕೆಲಸ |
| ವಾಸ ಸ್ಥಳ | : | ಹಂಗಳೂರು |

ಸಾಕ್ಷಿಯನ್ನು ಪ್ರಮಾಣೀಕರಿಸಲಾಯಿತು.

**ಮುಖ್ಯ ವಿಚಾರಣೆ: ಮಾನ್ಯ ಸ.ಸ.ಅ.ರವರಿಂದ:**

ದಿ: 23-02-2024 ರಂದು ಹಂಗಳೂರಿನ ವಿನಾಯಕ ಟಾಕೀಸು ಎದುರುಗಡೆ ಶಬರಿ ಹೊಟೇಲ್ ನ ಹತ್ತಿರ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿದಾಗ ನಾನು ಮತ್ತು ಚಾಸಾ-4 ರವರು ಹಾಜರು ಇದ್ದು ಚಾಸಾ-3 ರವರು ತೋರಿಸಿದ ಸ್ಥಳದಲ್ಲಿ ಬೆಳಗ್ಗೆ 9 ರಿಂದ 10 ಗಂಟೆಯವರೆಗೂ ಪಂಚನಾಮೆ ಜರುಗಿಸಿ ನಕ್ಷೆ ತಯಾರಿಸಿ ಪೋಟೋ ತೆಗೆದಿರುತ್ತಾರೆ.

ಸಾಕ್ಷಿಗೆ ನಿಪಿ-2, 3ನ್ನು ತೋರಿಸಲಾಗಿ, ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ ಮೇರೆಗೆ ಅದನ್ನು ನಿಪಿ-2(ಬಿ) ಮತ್ತು ನಿಪಿ-3(ಬಿ) ಎಂದು ಗುರುತಿಸಲಾಯಿತು. ಸಾಕ್ಷಿ ನಿಪಿ-5ರಲ್ಲಿ ತನ್ನನ್ನು ನೋಡಿ ಗುರುತಿಸಿರುತ್ತಾರೆ.

**ಪಾಟೀ ಸವಾಲು: ಆರೋಪಿತರ ಪರ ವಕೀಲರಾದ ಶ್ರೀ ಎಸ್ ಎಸ್ ಎನ್ ರವರಿಂದ:**

ಅಪಘಾತವು ರಾ. ಹೆದ್ದಾರಿಯ ಪೂರ್ವ ಅಂಚಿನಲ್ಲಿ ಆಗಿರುತ್ತದೆ. ಅಪಘಾತ ಹೇಗೆ ಸಂಭವಿಸಿತ್ತು ಎಂದು ನನಗೆ ತಿಳಿದಿಲ್ಲ. ಅಪಘಾತವಾದ ಸ್ಥಳವನ್ನು ಪೊಲೀಸರಿಗೆ ಯಾರು ತೋರಿಸಿದ್ದು ಎಂದು ನನಗೆ ತಿಳಿದಿಲ್ಲ. ನಿಪಿ-2 ರಲ್ಲಿ ಏನು ಬರೆದಿತ್ತು ಎಂದು ನನಗೆ ಈಗ ಹೇಳಲಾಗುವುದಿಲ್ಲ. ನಿಪಿ-2ನ್ನು ಕೈ ಬರವಣಿಗೆ ಮಾಡಿರುತ್ತಾರೆ. ಸದ್ರಿ ದಿನ ಸಹಿಯನ್ನು ನಿಪಿ-2 ಮತ್ತು 3ಕ್ಕೆ ಠಾಣೆಯಲ್ಲಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ನಕ್ಷೆ ಅಥವಾ ಪೋಟೋವನ್ನು ಸದ್ರಿ

ದಿನ ಪೊಲೀಸರು ಸ್ಥಳದಲ್ಲಿ ತಯಾರಿಸಿಲ್ಲ ಎಂದರೆ ಸರಿಯಲ್ಲ. ನಾನು ಘಟನಾ ಸ್ಥಳಕ್ಕೆ ಭೇಟಿ ನೀಡಿಲ್ಲ ಎಂದರೆ ಸರಿಯಲ್ಲ. ಪೊಲೀಸರು ಸೂಚಿಸಿದಂತೆ ಪ್ರಕರಣಕ್ಕೆ ಅನುಗುಣವಾಗಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ. ನನ್ನ ಮುಖ್ಯ ವಿಚಾರಣೆಯಲ್ಲಿ ಹೇಳಿದ ಎಲ್ಲಾ ವಿಚಾರಗಳು ಸುಳ್ಳು ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ. ದ. ನ್ಯಾ. ದಂ. ಕುಂದಾಪುರ**